# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 2370 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ |
| ಉತ್ತರಿಸುವ ದಿನಾಂಕ | : | 22/03/2022 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಡಿಸೆಂಬರ್-2021 ರಲ್ಲಿ ರಾಜ್ಯದ ಒಟ್ಟು 58 ನಗರ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆದು ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಮೀಸಲು ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಮೀಸಲು ಪ್ರಕಟಿಸದಿರುವುದರಿಂದ, ಅಭಿವೃದ್ಧಿ ಕಾರ್ಯಗಳಿಗೆ ತೊಡಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತುತ ಚುನಾಯಿತ ಪ್ರತಿನಿಧಿಗಳ ಸಮಿತಿಗಳು ಅಸ್ತಿತ್ವಕ್ಕೆ ಬಾರದೇ ಇರುವ ಸ್ಥಳೀಯ ಸಂಸ್ಥೆಗಳಿಗೆ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ 315 ರನ್ವಯ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ತೊಡಕು ಉಂಟಾಗಿರುವುದಿಲ್ಲ. |
| (ಇ) | ಅಧ್ಯಕ್ಷರ ಹಾಗೂ ಉಪಾಧ್ಯಕ್ಷರ ಮೀಸಲಾತಿಯನ್ನು ಪ್ರಕಟಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ನಗರಾಭಿವೃದ್ಧಿ ಇಲಾಖೆಯು ಹಲವು ನಗರ ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಿದ್ದು, ಅವುಗಳನ್ನು ಒಳಗೊಂಡಂತೆ ರಾಜ್ಯವನ್ನು ಒಂದು ಘಟಕವನ್ನಾಗಿಟ್ಟುಕೊಂಡು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ 11 ರನ್ವಯ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸಲು ನಿಯಮವನ್ನು ರಚಿಸಲು ಕ್ರಮವಹಿಸಲಾಗುತ್ತಿದೆ.<br><br>ಏತನ್ಮಧ್ಯೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ State of Maharashtra v/s Union of India ರವರು ಸಲ್ಲಿಸಿರುವ ರಿಟ್ ಪಿಟಿಷನ್ (ಸಿವಿಲ್) ಸಂಖ್ಯೆ: 841/2021 c/w ಎಸ್.ಎಲ್.ಪಿ. ಸಂಖ್ಯೆ: 19756/2021 ರಲ್ಲಿ ದಿನಾಂಕ: 15-12-2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಶನ್ ಸಂಖ್ಯೆ: 31495/2021 ಗೆ ಸಂಬಂಧಿಸಿದಂತೆ ದಿನಾಂಕ: 17-12-2021 ರ ಆದೇಶದಲ್ಲಿ ಡಾ॥ ಕೆ.ಕೃಷ್ಣಮೂರ್ತಿ ಮತ್ತು ಇತರರು ಸಲ್ಲಿಸಿದ್ದ ರಿಟ್ ಅರ್ಜಿ (ಸಿವಿಲ್) ಸಂಖ್ಯೆ: 256/1994 ರಲ್ಲಿ ದಿನಾಂಕ: |
| (ಈ) | ಅಧ್ಯಕ್ಷರ ಹಾಗೂ ಉಪಾಧ್ಯಕ್ಷರ ಎಷ್ಟು ಮೀಸಲು ಸ್ಥಾನ ಘೋಷಣೆಯಾಗಿದೆ ಹಾಗೂ ಆಡಳಿತ ಮಂಡಳಿ ರಚನೆಯಾಗಿದೆಯೇ? (ವಿವರ ಒದಗಿಸುವುದು) | |

| | | |
|---|---|---|
| | | 11–05–2010 ರಂದು ನೀಡಿರುವ ಆದೇಶವನ್ನು ಪುನರ್ ಪರಿಶೀಲಿಸಿ ಪ್ರಸ್ತುತ ನಿಗದಿಪಡಿಸುತ್ತಿರುವ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಮುಂದಿನ ಆದೇಶದವರೆಗೆ ನಿಗದಿಪಡಿಸದೇ ಸಂವಿಧಾನದ ಪ್ರಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ ನಿಗದಿಪಡಿಸಿ, ಉಳಿದ ಹುದ್ದೆಗಳನ್ನು ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಬೇಕಾಗಿರುತ್ತದೆ ಎಂದು ಉಲ್ಲೇಖಿಸಲಾಗಿದೆ.<br><br>ಮಾನ್ಯ ಸರ್ವೋಚ್ಛ ನ್ಯಾಯಾಲಯದ ಮೇಲ್ಕಂಡ ಆದೇಶದ ಸಾಧಕ ಬಾಧಕಗಳ ಬಗ್ಗೆ ಚರ್ಚಿಸಿ ಸರ್ಕಾರದಿಂದ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು. |

ಸಂಖ್ಯೆ: ನಅಇ 30 ಎಲ್‌ಸಿಕ್ಯೂ 2022

(ಎನ್. ನಾಗರಾಜು ಎಂ ಟಿ ಬಿ)
ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು